O.S.No.:352/2020
P.W.:1

ಈ ದಿನ ದಿಃ04.07.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಜಿ.ಕೆ.ಎಸ್ ರವರಿಂದಃ-**

ವಾದಿಯಾದ ಬಸವಲಿಂಗಯ್ಯ ರವರು ನನಗೆ ತಂದೆಯಾಗಬೇಕು. ನನಗೆ ಈ ದಾವೆಯಲ್ಲಿ ವಾದಿಯು ವಿಶೇಷ ಅಧಿಕಾರ ಪತ್ರ ಬರೆದುಕೊಟ್ಟಿದ್ದು, ನಾನು ವಾದಿಯ ಪರವಾಗಿ ಸಾಕ್ಷ್ಯ ನುಡಿಯಲು ಬಂದಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ವಾದಿಯು ನನಗೆ ಬರೆದುಕೊಟ್ಟ ವಿಶೇಷ ಅಧಿಕಾರ ಮೊಖ್ತರ್ ನಾಮೆ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ದಿನಾಂಕ ಃ 05.10.2018 ರ ನೊಂದಾಯಿತ ಕ್ರಯದ ಕರಾರು ಪತ್ರದ ಮೂಲಪ್ರತಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಸರ್ವೆ ನಂ.55/5 ಜಮೀನಿಗೆ ಸಂಬಂಧಿಸಿದಂತೆ 2018-2019 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

O.S.No.:352/2020
P.W.:1

ಸರ್ವೆ ನಂ.55/5 ಜಮೀನಿಗೆ ಸಂಬಂಧಿಸಿದಂತೆ 2019-2020 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಪ್ರತಿವಾದಿಗಳಿಗೆ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ನಿಪಿ-5 ಕ್ಕೆ ಸಂಬಂಧಿಸಿದ ಮೂರು ಅಂಚೆ ರಶೀದಿಗಳನ್ನು ಮತ್ತು ಮೂರು ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರು ಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ ನಿಪಿ-11 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**